# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯವ/ಕೊಉ/ಪಿಆರ್/03/2021-22

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 20.11.2021

ದಿನಾಂಕ: 20.11.2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-

ಸಭೆಗೆ ಹಾಜರಿದ್ದವರು:

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಡಾ॥ ಧಯಾಕರ್, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀ. ಬಸವರಾಜ್, ಕಂದಾಯ ನಿರೀಕ್ಷಕರು, ವಾರ್ಡ್ ಸಂಖ್ಯೆ:08 ಕೊಡಿಗೇಹಳ್ಳಿ

ವಾರ್ಡ್ ಸಮಿತಿ ಸದಸ್ಯರು

- ಶ್ರೀ. ಅಂತೋನಿ ದಾಸ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
- ಶ್ರೀ ಶ್ರೀಕಾಂತ್, ಆಮ್ಕೋ ಬಡಾವಣೆ, ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ನಗರ ಸದಸ್ಯರು
- ಶ್ರೀ ವಿ.ಎಂ ಸುಬ್ರಮಣಿರಾಜು, ಎಲ್.ಕೆ.ಆರ್ ನಗರ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿ ರವರು ಮಾತನಾಡುತ್ತ, ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃಧಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

ಶ್ರೀ ವೆಂಕಟಸ್ವಾಮಿ, ದೇವಿನಗರ ಸದಸ್ಯರು ಮತ್ತು ನಿವಾಸಿಗಳು ಮಾತನಾಡಿ ದೇವಿನಗರದ ಮುನೇಶ್ವರ ಬ್ಲಾಕ್‌ನಲ್ಲಿ ಒಳಚರಂಡಿ ಸಮಸ್ಯೆ ಕಾಡುತ್ತಿದ್ದು, ಇದರಿಂದ ಬಹಳ ತೊಂದರೆ ಉಂಟಾಗಿದೆ ಎಂದು ತಿಳಿಸುತ್ತ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಸಮಸ್ಯೆ ಬಗೆಹರಿಸಿರುವುದಿಲ್ಲ ಅದನ್ನು ಸರಿಪಡಿಸಲು ಸಭೆಗೆ ಮನವಿ ಮಾಡಿದರು ಹಾಗೂ ಜಲಿಗೆರಮ್ಮ ದೇವಸ್ಥಾನದ ಸುತ್ತಾಮುತ್ತಲಿನ ಪ್ರದೇಶಗಳಲ್ಲಿ ಡಿ-ಸಿಲ್ಟಿಂಗ್ ವ್ಯವಸ್ಥೆ ಮಾಡಿಕೊಡುವಂತೆ ಸಭೆಗೆ ತಿಳಿಸಿದರು.

ಈ ಕುರಿತು ನೋಡೆಲ್ ಅಧಿಕಾರಿಗಳು ಮಾತನಾಡಿ ಸಮಸ್ಯೆಯನ್ನು ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳಿಗೆ ಮೊದಲಿಗೆ ಸಮಸ್ಯೆ ಇರುವಂತಹ ಬಡಾವಣೆಗಳ ಕುರಿತು ತಿಳಿದುಕೊಂಡು ಒಳಚರಂಡಿ ಸರಿಪಡಿಸಲು ಕ್ರಮವಹಿಸಲು ಬಿಡಬ್ಲೂಎಸ್‌ಎಸ್‌ಬಿ ರವರಿಗೆ ತಿಳಿಸಲಾಯಿತು. ಚರಂಡಿಗಳ ಡಿ-ಸಿಲ್ಟಿಂಗ್ ಮಾಡಲು ಶ್ರೀ ಪ್ರವೀಣ್ ಎ.ಆರ್, ಕಿರಿಯ ಅಭಿಯಂತರರು, ವಾರ್ಡ್ ನಂ.08 ರವರಿಗೆ ತಿಳಿಸಲಾಯಿತು.

ಶ್ರೀ ವೀರಣ್ಣ, ಎಲ್.ಕೆ.ಆರ್ ನಗರ ಸದಸ್ಯರು ಮಾತನಾಡಿ ಸದರಿ ಬಡಾವಣೆಗೆ ಬೋರ್‌ವೆಲ್ ಕೊಳವೆಬಾವಿಯನ್ನು ಕೊರೆಯಿಸುವಂತೆ ಸಭೆಯಲ್ಲಿ ಮನವಿ ಮಾಡಿದರು ಬಡಾವಣೆಯಲ್ಲಿ ಈಗಾಗಲೇ ನೀರಿನ ಸಮಸ್ಯೆ ಇರುವುದರಿಂದ ಬಡಾವಣೆಗಳಲ್ಲಿ ನೀರಿನ ಅಭಾವ ಹೆಚ್ಚಾಗಿರುತ್ತದೆ ಹಾಗೂ ಬ್ಲಾಕ್ ಸ್ಪಾಟ್‌ಗಳನ್ನು ಸರಿಪಡಿಸಿ ಅದನ್ನು ಸುರಕ್ಷಿತಗೊಳಿಸಲು ಹಾಗೂ ಮೋರಿ ಸ್ಲಾಬ್‌ಗಳನ್ನು ಹಾಕಿಸಿ ಕೊಡುವಂತೆ ಸಭೆಗೆ ತಿಳಿಸಿದರು.

ಶ್ರೀ ಪ್ರವೀಣ್ ಎ.ಆರ್, ಕಿರಿಯ ಅಭಿಯಂತರರು ರವರು ಮಾತನಾಡಿ ಸಮಸ್ಯೆಯನ್ನು ಬಗೆಹರಿಸಿ ಕೊಡುವುದಾಗಿ ಸಭೆಗೆ ತಿಳಿಸಿದರು

ಶ್ರೀ. ಅಂತೋಣಿ ದಾಸ್, ಸಹಾಕಾರನಗರ ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಮಾತನಾಡಿ ಸಹಕಾರನಗರದಲ್ಲಿ ಸರ್ಕಾರಿ ಜಾಗವು ಒತ್ತುವರಿಯಾಗಿರುವುದು ಕಂಡುಬಂದಿರುತ್ತದೆ. ಐದು ಉದ್ಯಾನವನಗಳ ಜಾಗಗಳಿಗೆ ಖಾತಾ ಪ್ರಮಾಣ ಪತ್ರ ಮಾಡಿಸಿಕೊಡಿರುತ್ತಾರೆ ಎಂದು ಸಭೆಗೆ ತಿಳಿಸುತ್ತ, ಸಮಸ್ಯೆಯನ್ನು ಬಗ್ಗೆಹರಿಸಲು ಸಭೆಗೆ ಕೋರಿದರು.

ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಮಾತನಾಡಿ ಜಂಟಿ ಆಯುಕ್ತರು (ಯಲಹಂಕ ವಲಯ) ರವರಿಂದ ಬಿಡಿಎ ರವರಿಗೆ ಪಾರ್ಕ್‌ಗಳನ್ನು ಗುರುತಿಸಿ ಕೊಡಬೇಕೆಂದು ಪತ್ರ ಬರೆಯಲಾಗಿದ್ದು ಹಾಗೂ ಸದರಿ ಪ್ರಕರಣವು ಉಚ್ಚ ನ್ಯಾಯಲಯದಲ್ಲೆ ದಾವೆ ಇರುವುದಾಗೆ ತಿಳಿಸುತ್ತಾ, ನ್ಯಾಯಾಲಯದ ತೀರ್ಪಿನ ನಂತರ ಸಮಸ್ಯೆ ಬಗೆಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

ಈ ಕುರಿತು ನೋಡೆಲ್ ಅಧಿಕಾರಿಗಳು ಮಾತನಾಡಿ ಸದರಿ ಬಡಾವಣೆಯ ಸಮಸ್ಯೆಯನ್ನು ಕಂದಾಯ ಪರಿವೀಕ್ಷಕರು ಹಾಗೂ ಶ್ರೀ ಪ್ರವೀಣ್ ಎ.ಆರ್, ಕಿರಿಯ ಅಭಿಯಂತರರವರಿಗೆ ಒತ್ತುವರಿದಾರರಿಗೆ ಅವಕಾಶ ನೀಡದಂತೆ ಸಾರ್ವಜನಿಕ ಆಸ್ತಿಪಾಸ್ತಿಗಳನ್ನು ರಕ್ಷಿಸಲು ಫೆನ್ಸಿಂಗ್, ಕಾಂಪೌಡ್ ಹಾಗೂ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು.

ವಿ.ಎಂ ಸುಬ್ರಮಣಿರಾಜು, ಎಲ್.ಕೆ.ಆರ್ ನಗರ ಸದಸ್ಯರು ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಎಂದು ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಡಂಪಿಂಗ್ ಯಾರ್ಡ್‌ಗೆ ಸ್ಥಳಾಂತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಹಾಗೂ ಈ ಸಭೆಗೆ ಗೈರು ಹಾಜರಿದ್ದವರಿಗೆ ಕಾರಣ ಕೇಳಿ ನೋಟೀಸ್‌ಗಳನ್ನು ಜಾರಿ ಮಾಡಲು ಸೂಚಿಸಿದರು. ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಶ್ರೀ ಗುರು)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ